# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1041 (1146)** |
| ಸದಸ್ಯರ ಹೆಸರು | : | **ಶ್ರೀ ಜಗದೇವ್ ಗುತ್ತೇದಾರ್** (**ವಿಧಾನ ಸಭೆಯಿಂದ ಚುನಾಯಿತರಾದವರು**) |
| ಉತ್ತರಿಸುವ ದಿನಾಂಕ | : | **19.12.2024** |
| ಉತ್ತರಿಸುವ ಸಚಿವರು | : | **ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು** |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| **ಅ)** | ಕಲಬುರಗಿಯಲ್ಲಿ ನಡೆದ ಸಚಿವ ಸಂಪುಟದಲ್ಲಿ 46 ವಿಷಯಗಳು ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ಸಂಬಂಧಿಸಿದರೂ ಕೂಡ ಸದರಿ ನಿರ್ಣಯಗಳು ಇನ್ನೂ ಜಾರಿಯಾಗದಿರುವುದಕ್ಕೆ ಕಾರಣವೇನು; ಹಾಗೂ ಈ ಸಚಿವ ಸಂಪುಟದ ನಿರ್ಣಯಗಳು ಯಾವಾಗ ಜಾರಿಗೆ ಬರುತ್ತವೆ; | ದಿನಾಂಕ:17.09.2024 ರಂದು ಕಲಬುರಗಿಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಯೋಜನಾ ಇಲಾಖೆಗೆ ಸಂಬಂಧಿಸಿದಂತೆ ಮೂರು ನಿರ್ಣಯಗಳನ್ನು ಕೈಗೊಳ್ಳಲಾಗಿದ್ದು, ಸದರಿ ನಿರ್ಣಯಗಳ ಅನುಷ್ಠಾನ ಕುರಿತು ಕ್ರಮವಹಿಸಲಾಗುತ್ತಿದೆ. ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ. |
| **ಆ)** | ಸದರಿ ಭಾಗದ ಅಭಿವೃದ್ಧಿಗೆ ಪ್ರತ್ಯೇಕ ಸಚಿವಾಲಯ ಆರಂಭಿಸಲಾಗುವುದೇ; ಹಾಗೂ ಕಲ್ಯಾಣ ಕರ್ನಾಟಕ ಭಾಗದ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು? | ದಿನಾಂಕ:17.09.2024 ರಂದು ಕಲಬುರಗಿಯಲ್ಲಿ ನಡೆದ ಸಚಿವ ಸಂಪುಟ ಸಭೆಯ ನಿರ್ಣಯದಂತೆ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಸಂಬಂಧಿಸಿದಂತೆ ಪ್ರತ್ಯೇಕ ಸಚಿವಾಲಯ ಸೃಜಿಸುವ ಪ್ರಕ್ರಿಯೆಯು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಲ್ಲಿ ಚಾಲ್ತಿಯಲ್ಲಿರುತ್ತದೆ.<br>ಕಲ್ಯಾಣ ಕರ್ನಾಟಕ ಭಾಗದ 371(ಜೆ) ಅಡಿ ಗುರುತಿಸಲಾದ ಹುದ್ದೆಗಳ ಪೈಕಿ ಖಾಲಿ ಇರುವ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡುವಂತೆ ದಿನಾಂಕ:08.10.2024ರ ಅನಧಿಕೃತ ಟಿಪ್ಪಣಿಯಲ್ಲಿ ಎಲ್ಲಾ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳಿಗೆ ತಿಳಿಸಲಾಗಿದೆ. |

ಸಂಖ್ಯೆ: ಪಿಡಿಎಸ್ 161 ಹೆಚ್ ಕೆಡಿ 2024

**(ಡಿ.ಸುಧಾಕರ್)**
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ ಸಚಿವರು.

## ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1041(1146)ರ ಅನುಬಂಧ

| ಕ್ರ. ಸಂ | ಸಭೆಯ ದಿನಾಂಕ | ವಿಷಯ ಸಂಖ್ಯೆ | ವಿಷಯ | ಅನುಪಾಲನ ವರದಿ |
|---|---|---|---|---|
| 1 | 17.09.2024 | ಸಿ.537/2024 | ಕಲ್ಯಾಣ ಕರ್ನಾಟಕ ಪ್ರದೇಶದ ಸರ್ವಾಂಗೀಣ ಅಭಿವೃದ್ಧಿಗಾಗಿ ರೂ.5000 ಕೋಟಿಗಳ ವಿಶೇಷ ಅನುದಾನವನ್ನು ನೀಡಲು ಕೇಂದ್ರ ಸರ್ಕಾರವನ್ನು ಕೋರುವ ಬಗ್ಗೆ. | ಕಲ್ಯಾಣ ಕರ್ನಾಟಕ ಭಾಗದ ಸರ್ವಾಗೀಣ ಅಭಿವೃದ್ಧಿಗಾಗಿ ರೂ.5000.00 ಕೋಟಿಗಳನ್ನು ನೀಡುವಂತೆ ಕೇಂದ್ರ ಸರ್ಕಾರವನ್ನು ಕೋರಲು ವಿಸ್ತೃತ ಪ್ರಸ್ತಾವನೆಯನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸುವಂತೆ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಪತ್ರ ಬರೆಯಲಾಗಿದೆ, ಪ್ರಸ್ತಾವನೆಯನ್ನು ನಿರೀಕ್ಷಿಸಲಾಗಿದೆ. |
| 2 | 17.09.2024 | ಸಿ.537/2024 | ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿಗಾಗಿ ಕೆಲಸಗಳನ್ನು ಇನ್ನೂ ಪರಿಣಾಮಕಾರಿಯಾಗಿ ಜಾರಿಗೊಳಿಸಲು ಮೇಲುಸ್ತುವಾರಿ ಮಾಡಲು ಒಂದು ಪ್ರತ್ಯೇಕ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಸಚಿವಾಲಯವನ್ನುಸ್ಥಾಪಿಸುವ ಬಗ್ಗೆ | ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿಗಾಗಿ ಕೆಲಸಗಳನ್ನು ಇನ್ನೂ ಹೆಚ್ಚಿನ ಪರಿಣಾಮಕಾರಿಯಾಗಿ ಜಾರಿಗೊಳಿಸಲು ಮತ್ತು ಮೇಲುಸ್ತುವಾರಿ ಮಾಡಲು ಒಂದು ಪ್ರತ್ಯೇಕ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಸಚಿವಾಲಯವನ್ನು ಸೃಜಿಸುವ ಕುರಿತು ಮುಂದಿನ ಕ್ರಮಕ್ಕಾಗಿ ಯೋಜನಾ ಇಲಾಖೆಯ ಕಡತ ಸಂಖ್ಯೆ: ಪಿಡಿಎಸ್ 118 ಹೆಚ್ ಕೆಡಿ 2024ರಲ್ಲಿ ಪ್ರಸ್ತಾವನೆಯನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಗೆ ಸಲ್ಲಿಸಲಾಗಿದೆ. |
| 3 | 17.09.2024 | ಸಿ.537/2024 | ಸಂವಿಧಾನ ಅನುಚ್ಛೇದ 371(ಜೆ) ರನ್ವಯ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ | ಸಂವಿಧಾನ ಅನುಚ್ಛೇದ 371(ಜೆ) ರನ್ವಯ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವಂತೆ ಅನಧಿಕೃತ ಟಿಪ್ಪಣಿ ಸಂಖ್ಯೆ: ಪಿಡಿಎಸ್ 101 ಹೆಚ್ ಕೆಡಿ 2023 ದಿ:08.10.2024 ರಲ್ಲಿ ಎಲ್ಲಾ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳನ್ನು ಕೋರಲಾಗಿದೆ. |